**ದಿನಾಂಕಃ 02-04-2019 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**-ಃಮುಂದುವರೆದ ಮುಖ್ಯ ವಿಚಾರಣೆ ಪ್ರತಿವಾದಿ ಪರ ಶ್ರೀ ಟಿಜಿಎಸ್ ವಕೀಲರಿಂದಃ-**

ದಾವೆಗೆ ಸಂಬಂಧಿಸಿದಂತೆ ಕೆಲವು ದಾಖಲಾತಿಗಳನ್ನು ಹಾಜರು ಮಾಡುತ್ತಿದ್ದು ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಿಕೊಳ್ಳಲು ಕೋರುತ್ತೇನೆ.

ದಾವಾ ಆಸ್ತಿಗೆ ಸಂಬಂಧಿಸಿದಂತೆ 17 ಆರ್‌ಟಿಸಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಡಿ-1 ರಿಂದ ನಿಡಿ-17 ಎಂದು ಕ್ರಮವಾಗಿ ಗುರುತಿಸಲಾಯಿತು. ಸರ್ವೆ ನಂ. 69/3ಎ ಜಮೀನಿಗೆ ಸಂಬಂಧಿಸಿದ 3 ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಡಿ-18 ರಿಂದ 20 ಎಂದು ಗುರುತಿಸಲಾಯಿತು. ಸರ್ವೆ ನಂ. 39/3ಸಿ ಜಮೀನಿಗೆ ಸಂಬಂಧಿಸಿದ 3 ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಡಿ-21 ರಿಂದ 23 ಎಂದು ಗುರುತಿಸಲಾಯಿತು. ಸರ್ವೆ ನಂ. 69/3ಡಿ ಜಮೀನಿಗೆ ಸಂಬಂಧಿಸಿದ 3 ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಡಿ-24 ರಿಂದ 26 ಎಂದು ಗುರುತಿಸಲಾಯಿತು. ಸರ್ವೆ ನಂ. 69/3ಇ ಜಮೀನಿಗೆ ಸಂಬಂಧಿಸಿದ 3 ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಡಿ-27 ರಿಂದ 29 ಎಂದು ಗುರುತಿಸಲಾಯಿತು. ಸರ್ವೆ ನಂ. 35/4 ಜಮೀನಿಗೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-30 ಎಂದು ಗುರುತಿಸಲಾಯಿತು. ಸರ್ವೆ ನಂ. 2/1ಸಿ ಜಮೀನಿಗೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-31 ಎಂದು, ಖಾತೆ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-32 ಎಂದು, ಮಾರುಕಟ್ಟೆ ದೃಢೀಕರಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಡಿ-33 ಎಂದು ಗುರುತಿಸಲಾಯಿತು.

ಆದ್ದರಿಂದ ದಾವಾವನ್ನು ವಜಾ ಮಾಡಲು ಕೋರಿಕೊಳ್ಳುತ್ತೇನೆ.

**ಶ್ರೀ ಜಿ.ಎಸ್.ಪಿ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು ಕೋರಿಕೆ ಮೇರೆಗೆ ಮುಂದೂಡಲಾಯಿತು.**

ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ತಿಪಟೂರು.